ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001.

ಕರ್ನಾಟಕ ಸರಕಾರ

( ಕಂದಾಯ ಇಲಾಖೆ )

Deputy Commissioner & District Magistrate's Office, Dakshina Kannada District, Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/27 ದಿನಾಂಕ: 06-08-2021

# ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್-19 ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ಮಾರ್ಗಸೂಚಿಗಳನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ : 1) ಸರಕಾರದ ಆದೇಶ ಸಂ. ಆರ್ ಡಿ158 ಟಿಎನ್ಆರ್ 2020 ; ದಿನಾಂಕ: 03-07-2021
2) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 16-07-2021
3) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 18-07-2021
4) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 24-07-2021
5) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 30-07-2021
6) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ;ದಿನಾಂಕ: 31-07-2021
7) ಭಾರತ ಸರಕಾರದ ಆದೇಶ ಸಂ. 04/COVID/fest/AS(H)/2021 ; ದಿನಾಂಕ: 04-08-2021
8) ಸರಕಾರದ ಆದೇಶ ಸಂ. ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 06-08-2021.

=======@=======

ದಕ್ಷಿಣಕನ್ನಡಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕಾಲಕಾಲಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಕೇರಳ ರಾಜ್ಯದಿಂದ ದಕ್ಷಿಣ ಕನ್ನಡ ಜಿಲ್ಲೆಗೆ ಆಗಮಿಸುವವರಿಗೆ ಈಗಾಗಲೇ ನಿರ್ಬಂಧಗಳನ್ನು ವಿಧಿಸಿ ಆದೇಶಿಸಲಾಗಿರುತ್ತದೆ.

ದಿನಾಂಕ: 06-08-2021 ರಂದು ಮಾನ್ಯ ಮುಖ್ಯಮಂತ್ರಿಯವರು ಕೋವಿಡ್ 19 ಪರಿಸ್ಥಿತಿಯ ಕುರಿತಾಗಿ ರಾಜ್ಯದ ಅಧಿಕಾರಿಗಳು ಮತ್ತು ಆರೋಗ್ಯ ತಜ್ಞರೊಂದಿಗೆ ನಡೆಸಿದ ಸಭೆಯಲ್ಲಿ ಕೋವಿಡ್ ನಿಯಂತ್ರಣಕ್ಕಾಗಿ ಹೆಚ್ಚುವರಿ ಕ್ರಮಗಳನ್ನು ವಹಿಸಲು ತಜ್ಞರ ಸಭೆಯು ಶಿಫಾರಸ್ಸು ಮಾಡಿದ ಹಿನ್ನಲೆಯಲ್ಲಿ ಮೇಲ್ಕಂಡ (8) ರ ಉಲ್ಲೇಖದಂತೆ ಸರಕಾರವು ಹೆಚ್ಚುವರಿ ಕ್ರಮ/ನಿರ್ಬಂಧಗಳನ್ನು ಹೇರಿ ಆದೇಶಿಸಿದೆ.

ಸರಕಾರದ ಆದೇಶದನ್ವಯ ಮತ್ತು ಜಿಲ್ಲೆಯ ಪ್ರಸ್ತುತ ವಿದ್ಯಮಾನಗಳನ್ನು ಅವಲೋಕಿಸಿ ಕೋವಿಡ್ 19 ಪ್ರಸರಣವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ **ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ.., ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣಕನ್ನಡಜಿಲ್ಲೆ, ಮಂಗಳೂರು** ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ನಿರ್ಬಂಧಗಳನ್ನು ಹೊರಡಿಸಿರುತ್ತೇನೆ. ಈ ನಿರ್ಬಂಧಗಳು **ದಿನಾಂಕ: 07-08-2021 ರಿಂದ ದಿನಾಂಕ: 16-08-2021 ರವರೆಗೆ ಜಾರಿಯಲ್ಲಿರುತ್ತದೆ**.

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

1. ಜಿಲ್ಲೆಯಾದ್ಯಂತ ರಾತ್ರಿ 9.00 ರಿಂದ ಬೆಳಿಗ್ಗೆ 5.00 ರವರೆಗೆ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ. (ಅನುಬಂಧ ಎ-ಯ ನಿರ್ಬಂಧಗಳಿಗೆಒಳಪಟ್ಟು)
2. ಜಿಲ್ಲೆಯಾದ್ಯಂತ ವಾರಾಂತ್ಯದ ಕರ್ಫ್ಯೂ ಶುಕ್ರವಾರ ರಾತ್ರಿ 9.00 ರಿಂದ ಸೋಮವಾರ ಬೆಳಿಗ್ಗೆ 5.00 ರವರೆಗೆ ಜಾರಿಯಲ್ಲಿರುತ್ತದೆ. (ಅನುಬಂಧ ಬಿ -ಯ ನಿರ್ಬಂಧಗಳಿಗೆ ಒಳಪಟ್ಟು)
3. ಜಿಲ್ಲೆಯಾದ್ಯಂತ ಎಲ್ಲಾಸಾಮಾಜಿಕ / ರಾಜಕೀಯ / ಸಾಂಸ್ಕೃತಿಕ / ಧಾರ್ಮಿಕ ಕಾರ್ಯಕ್ರಮಗಳು / ಸಮಾರಂಭಗಳು ಹಾಗೂ ಉತ್ಸವಗಳನ್ನು ನಿರ್ಬಂಧಿಸಲಾಗಿದೆ.
4. ಮದುವೆಯನ್ನು ಗರಿಷ್ಟ 50 ಜನರ ಪರಿಮಿತಿಗೊಳಪಟ್ಟು ಸ್ಥಳೀಯ ಆಡಳಿತದ ಪ್ರಾಧಿಕಾರಗಳಿಂದ ಪೂರ್ವಾನುಮತಿಯೊಂದಿಗೆಆಯೋಜಿಸಲುಅನುಮತಿಸಿದೆ. ಸ್ಥಳೀಯ ಪಂಚಾಯತ್ ಅಭಿವೃದ್ದಿ ಅಧಿಕಾರಿ ಹಾಗೂ ಕಂದಾಯ ಅಧಿಕಾರಿಗಳು ಸಮಾರಂಭಕ್ಕೆ ಭೇಟಿ ನೀಡಿ ಕೋವಿಡ್ ನಿಯಮಾವಳಿ ಉಲ್ಲಂಘನೆ ಆಗದಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.
5. ಅಂತ್ಯಸಂಸ್ಕಾರದಲ್ಲಿ ಗರಿಷ್ಠ 20 ಜನರಿಗೆ ಮಾತ್ರ ಭಾಗವಹಿಸಲು ಅನುಮತಿಸಿದೆ.
6. ದಿನಾಂಕ: 06-08-2021 ರಿಂದ ದಿನಾಂಕ: 16-08-2021 ರವರೆಗೆ ಶ್ರೀದುರ್ಗಾಪರಮೇಶ್ವರಿ ದೇವಸ್ಥಾನ ಕಟೀಲು, ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಗಳು ಭಕ್ತಾದಿಗಳಿಗೆ ಬೆಳಿಗ್ಗೆ 7 ರಿಂದ ಸಂಜೆ 7 ರವರೆಗೆ ಮಾತ್ರ ತೆರೆದಿರುತ್ತದೆ. ಈ ಸಂದರ್ಭದಲ್ಲಿ ಕಡ್ಡಾಯವಾಗಿ ಸಾಮಾಜಿಕ ಅಂತರ, ಅಗತ್ಯ ಕೋವಿಡ್ ನಿಯಂತ್ರಣ ಮುಂಜಾಗೃತಾ ಕ್ರಮಗಳನ್ನು ಕೈಗೊಂಡು ಭಕ್ತಾದಿಗಳಿಗೆ ಕೇವಲ ದೇವರ ದರ್ಶನಕ್ಕೆ ಮಾತ್ರ ಅವಕಾಶನೀಡಲಾಗಿದೆ. ತೀರ್ಥ ಪ್ರಸಾದ, ಸೇವೆಗಳು, ಅನ್ನಸಂತರ್ಪಣೆಗೆ ಅವಕಾಶವಿರುವುದಿಲ್ಲ.
    - ವಾರಾಂತ್ಯದಲ್ಲಿ (ಶನಿವಾರ ಮತ್ತು ಭಾನುವಾರ) ಭಕ್ತಾದಿಗಳ ಪ್ರವೇಶವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ ಹಾಗೂ ವಸತಿಗೃಹಗಳಲ್ಲಿ ತಂಗುವುದಾಗಲೀ ಅಥವಾ ದೇವರದರ್ಶನಕ್ಕೆ ಅವಕಾಶವಿರುವುದಿಲ್ಲ.
    - ಶನಿವಾರ ಮತ್ತು ಭಾನುವಾರಗಳಂದು ಎಲ್ಲಾ ರೀತ್ಯಾ ಉತ್ಸವ / ಸೇವೆಗಳು, ತೀರ್ಥ, ಪ್ರಸಾದ, ಮುಡಿ ಸೇವೆ ವಸತಿಗಳನ್ನು ನಿರ್ಬಂಧಿಸಿ, ಅರ್ಚಕರುಗಳಿಂದ ಸಾಂಪ್ರದಾಯಿಕಪೂಜೆಗೆ ಮಾತ್ರ ಅವಕಾಶಕಲ್ಪಿಸಿದೆ.
    - ವಾರಾಂತ್ಯ ದಿನಗಳನ್ನು ಹೊರತುಪಡಿಸಿ (ಶನಿವಾರ ಮತ್ತು ಭಾನುವಾರ) ಉಳಿದ ದಿನಗಳಲ್ಲಿ ವಸತಿ ಗೃಹಗಳಲ್ಲಿ ತಂಗಲು ಬಯಸುವವರು 72 ಗಂಟೆಯೊಳಗೆ RT-PCR ಟೆಸ್ಟ್ ಮಾಡಿಸಿ, ನೆಗೆಟಿವ್ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು.
    - ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಕೋವಿಡ್ ಶಿಷ್ಟಾಚಾರ ನಿಯಮ ಪಾಲಿಸುವ ದೃಷ್ಟಿಯಿಂದ ಕೊಠಡಿಗಳಲ್ಲಿ ಕಡ್ಡಾಯವಾಗಿ ಹೆಚ್ಚುವರಿ ವ್ಯಕ್ತಿಗಳು ತಂಗಲುಅವಕಾಶವಿರುವುದಿಲ್ಲ.
    - ಎಲ್ಲಾ ಕೊಠಡಿಗಳನ್ನು ವಾಸ್ತವ್ಯಕ್ಕೆ ಮುಂಚೆ ಸ್ಯಾನಿಟೈಸ್ ಮಾಡತಕ್ಕದ್ದು ಹಾಗೂ ಭಕ್ತಾದಿಗಳು ಮಾಸ್ಕನ್ನು ಕಡ್ಡಾಯವಾಗಿ ಧರಿಸುವುದು.
    - ಜಾತ್ರೆಗಳು, ದೇವಾಲಯದಉತ್ಸವಗಳು, ಮೆರವಣಿಗೆಗಳುಇತ್ಯಾದಿಗಳನ್ನುನಿಷೇಧಿಸಿದೆ.
7. ಈ ಕಛೇರಿಯಿಂದ ಈಗಾಗಲೇ ದಿನಾಂಕ: 19-07-2021 ರಂದು ನೀಡಿದ ಆದೇಶದಂತೆ ಶೈಕ್ಷಣಿಕ ಸಂಸ್ಥೆಗಳನ್ನು ತೆರೆಯಲು ಅನುಮತಿಸಿದೆ.
8. ನೆರೆಯ ಕೇರಳ ರಾಜ್ಯದ ಕಾಸರಗೋಡು ಜಿಲ್ಲೆ ಮತ್ತು ಮಂಗಳೂರು ನಡುವಿನಕೆ.ಎಸ್.ಆರ್.ಟಿ.ಸಿ. ಮತ್ತು ಎಲ್ಲಾ ಖಾಸಗಿ ಬಸ್ ಗಳ ಸಂಚಾರವನ್ನು ಸಂಪೂರ್ಣವಾಗಿ ದಿನಾಂಕ: 16-08-2021 ರವರೆಗೆ ನಿರ್ಬಂಧಿಸಲಾಗಿದೆ.
9. ನೆರೆಯ ಕೇರಳ ರಾಜ್ಯದ ಕಾಸರಗೋಡು ಜಿಲ್ಲೆಯಿಂದ ದಕ್ಷಿಣ ಕನ್ನಡ ಜಿಲ್ಲೆಗೆ ಉದ್ಯೋಗಕ್ಕೆ ದಿನಂಪ್ರತಿ ಪ್ರಯಾಣಿಸುವವರು, ಕಾಲೇಜು ವಿದ್ಯಾರ್ಥಿಗಳನ್ನು ಕೋವಿಡ್ ಲಸಿಕೆ ಪಡೆದಿದ್ದರೂ (2 ಡೋಸ್ ಆಗಿದ್ದರೂ) RT-PCR ಪರೀಕ್ಷೆಯ ನೆಗೆಟಿವ್ ವರದಿಯ ಆಧಾರದಲ್ಲಿ 7 ದಿನಗಳ ಅವಧಿಗೆ ಅನುಮತಿಸಲಾಗುವುದು. ಪ್ರತೀ 7 ದಿನಕ್ಕೊಮ್ಮೆ RT-PCR ಪರೀಕ್ಷೆಯ ನೆಗೆಟಿವ್ ವರದಿ ಪಡೆಯತಕ್ಕದ್ದು.

**10.** ಕೇರಳದಿಂದ / ಮಹಾರಾಷ್ಟ್ರದಿಂದ, ಇತರ ಹೊರ ರಾಜ್ಯದಿಂದ ನರ್ಸಿಂಗ್ / ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು RT-PCR ಪರೀಕ್ಷೆಯ ನೆಗೆಟಿವ್ ವರದಿಯೊಂದಿಗೆ ಮಂಗಳೂರಿಗೆ ಬಂದ ಬಳಿಕ ಒಂದು ವಾರದ ಕಡ್ಡಾಯ ಕ್ವಾರಂಟೈನ್ ಗೆ ಒಳಪಡತಕ್ಕದ್ದು. ಏಳು ದಿನದ ಬಳಿಕ ಮತ್ತೊಮ್ಮೆ ಕೋವಿಡ್ ತಪಾಸಣೆಗೆ ಒಳಪಡತಕ್ಕದ್ದು.

**11.** RT-PCR ಪರೀಕ್ಷೆಯ ನೆಗೆಟಿವ್ ವರದಿಯನ್ನು ತರದೇ ರೈಲು ಮೂಲಕ ಗಡಿಪ್ರವೇಶಿಸಿದ ವ್ಯಕ್ತಿಗಳು ರೈಲ್ವೇ ಸ್ಟೇಷನ್ ಗಳಲ್ಲಿ ಕೋವಿಡ್ ತಪಾಸಣೆಗೆ ಒಳಪಡತಕ್ಕದ್ದು. ತಪಾಸಣೆಯ ವೇಳೆ ಪಾಸಿಟಿವ್ ಬಂದಲ್ಲಿ / ವರದಿ ಬರುವವರೆಗೆ ಕೋವಿಡ್ ಕೇರ್ ಸೆಂಟರ್ ನಲ್ಲಿ ಕ್ವಾರಂಟೈನ್ ಆಗುವುದು ಕಡ್ಡಾಯವಾಗಿರುತ್ತದೆ. ಈ ಬಗ್ಗೆ ಸಂಬಂಧಪಟ್ಟ ತಹಶೀಲ್ದಾರರು ಕೋವಿಡ್ ಕೇರ್ ಸೆಂಟರ್ ತೆರೆಯಲು ಕ್ರಮವಹಿಸುವುದು.

**12.** ಚೆಕ್ ಪೋಸ್ಟ್ ಗಳಲ್ಲಿ ಸಿಬ್ಬಂದಿಗಳನ್ನು ನಿಯೋಜಿಸಿ 24*7 ತಪಾಸಣೆ ನಡೆಯುವ ಬಗ್ಗೆ ಸಂಬಂಧಪಟ್ಟ ಉಪವಿಭಾಗಾಧಿಕಾರಿ ಹಾಗೂ ಉಪ ಪೊಲೀಸ್ ಅಧೀಕ್ಷಕರು ಆಗಾಗ್ಗೆ ಸ್ಥಳಕ್ಕೆ ಭೇಟಿ ನೀಡಿ ಖಾತ್ರಿಪಡಿಸಿಕೊಳ್ಳತಕ್ಕದ್ದು.

**13.** ವೈದ್ಯಕೀಯ ತುರ್ತು ಸೇವೆ, ಆಂಬ್ಯುಲೆನ್ಸ್ ಗೂ ಅಂತರ್ ರಾಜ್ಯ ಸರಕು ಸಾಮಾಗ್ರಿಗಳ ಸಾಗಾಟಕ್ಕೆ ಮೇಲ್ಕಂಡ ನಿರ್ಬಂಧವು ಅನ್ವಯಿಸುವುದಿಲ್ಲ.

ಮೇಲಿನ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 06-08-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

**ಡಾ. ರಾಜೇಂದ್ರಕೆ.ವಿ, *ಭಾ.ಆ.ಸೇ.***
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ,**
**ಹಾಗೂ ಅಧ್ಯಕ್ಷರು,**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

**<u>ಅನುಬಂಧ-ಎ</u>**

## <u>ರಾತ್ರಿ ಕರ್ಫ್ಯೂ ಮಾರ್ಗಸೂಚಿಗಳು</u>

**1.** ಸಾರ್ವಜನಿಕರ ಓಡಾಟವನ್ನು ಶುಕ್ರವಾರ ರಾತ್ರಿ 9:00 ಗಂಟೆಯಿಂದ ಸೋಮವಾರ ಬೆಳಿಗ್ಗೆ 5.00 ಗಂಟೆಯವರೆಗೆ ಅತ್ಯಾವಶ್ಯಕ ಹಾಗೂ ತುರ್ತು ಸಂದರ್ಭಗಳನ್ನು ಹೊರತುಪಡಿಸಿ ಸಂಪೂರ್ಣವಾಗಿ ನಿಷೇಧಿಸಿದೆ.

2. ತುರ್ತು ಚಿಕಿತ್ಸೆಗಾಗಿ ಸಂಚರಿಸಬೇಕಾದ ಅಗತ್ಯವಿರುವ ರೋಗಿಗಳು ಮತ್ತು ಅವರ ಪರಿಚಾರಕರು / ವ್ಯಕ್ತಿಗಳಿಗೆ ಸಂಚರಿಸಲು ಅನುಮತಿ ಇರುತ್ತದೆ.

3. ರಾತ್ರಿ ವೇಳೆಯಲ್ಲಿ ಕಾರ್ಯನಿರ್ವಹಿಸುವ ಅಗತ್ಯವಿರುವಂತಹ ಎಲ್ಲಾಕೈಗಾರಿಕೆಗಳು / ಕಂಪನಿಗಳಿಗೆ ಕಾರ್ಯನಿರ್ವಹಿಸಲು ಅನುಮತಿ ಇರುತ್ತದೆ.

4. ಅಂತಹ ಸಂಸ್ಥೆಗಳ ನೌಕರರ ಸಂಚಾರಕ್ಕೆ, ಅವರ ಸಂಬಂಧಪಟ್ಟ ಸಂಸ್ಥೆ / ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ / ಹೊಂದಿಕೊಂಡು ಪ್ರಯಾಣಿಸಲು ಅನುಮತಿಸಲಾಗುವುದು. ದೂರವಾಣಿ ಸಂಪರ್ಕ ಮತ್ತು ಅಂತರ್ಜಾಲ ಸೇವೆ ಒದಗಿಸುವ ಸಂಸ್ಥೆಗಳ ನೌಕರರು ಮತ್ತು ವಾಹನಗಳ ಸಂಚಾರಕ್ಕೆ ಅವರ ಸಂಬಂಧಪಟ್ಟ ಸಂಸ್ಥೆ / ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ ಹೊಂದಿಕೊಂಡು ಪ್ರಯಾಣಿಸಲು ಅನುಮತಿಸಲಾಗುವುದು.

5. ಮಾಹಿತಿ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಆಧಾರಿತ ಸೇವೆಗಳ ಕಂಪನಿಗಳು/ ಸಂಸ್ಥೆಯ ಅತ್ಯಾವಶ್ಯಕ ಸಿಬ್ಬಂದಿ / ನೌಕರರು ಮಾತ್ರ ಕಚೇರಿಯಿಂದ ಕಾರ್ಯ ನಿರ್ವಹಿಸತಕದ್ದು. ಉಳಿದ ಸಿಬ್ಬಂದಿಯು ಮನೆಯಿಂದಲೇ ಕಾರ್ಯ ನಿರ್ವಹಿಸುವುದು.

5. ಔಷಧ ಮಳಿಗೆಗಳು ಸೇರಿದಂತೆ ವೈದ್ಯಕೀಯ, ತುರ್ತು ಮತ್ತು ಅತ್ಯಾವಶ್ಯಕಸೇವೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸುವುದುಮತ್ತುಇತರ ವಾಣಿಜ್ಯ ಚಟುವಟಿಕೆಗಳನ್ನುನಿಷೇಧಿಸಿದೆ.

6. ಖಾಲಿ ವಾಹನಗಳು ಸೇರಿದಂತೆ, ಟ್ರಕ್ ಗಳು, ಸರಕು ಸಾಗಣೆ ವಾಹನಗಳು ಅಥವಾ ಯಾವುದೇ ಸರಕು ಸಾಗಣೆ ವಾಹನಗಳ ಮೂಲಕ ಎಲ್ಲಾ ಬಗೆಯ ಸರಕುಗಳನ್ನು ಸಾಗಿಸುವುದಕ್ಕೆ ಯಾವುದೇ ನಿರ್ಬಂಧ ಇರುವುದಿಲ್ಲ. ಇ-ವಾಣಿಜ್ಯ ಕಂಪನಿಗಳಿಂದ ಸರಕುಗಳ ಹೋಮ್ ಡೆಲಿವರಿಗೆ ಮತ್ತು ಅವುಗಳ ಕಾರ್ಯಾಚರಣೆಗಳಿಗೆ ಅನುಮತಿಸಿದೆ.

7. ಬಸ್ಸು, ರೈಲು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿಸಿದೆ. ವಿಮಾನ, ರೈಲು ಮತ್ತು ರಸ್ತೆ ಮೂಲಕ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಲು ವಿಮಾನ ನಿಲ್ದಾಣಗಳಿಗೆ, ಬಸ್ ಟರ್ಮಿನಲ್ / ಬಸ್ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣಗಳಿಗೆ ಹೋಗಿ ಬರುವುದಕ್ಕೆ ಸಾರ್ವಜನಿಕ ಸಾರಿಗೆ ವಾಹನಗಳು, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಸಂಚಾರಕ್ಕೆ ಅನುಮತಿ ನೀಡಲಾಗಿದೆ.

8. ಅಧಿಕೃತ ಪ್ರಯಾಣ ದಾಖಲೆ ಅಥವಾ ಟಿಕೇಟ್ ಅನ್ನು ಪ್ರದರ್ಶಿಸಿದ ನಂತರವೇ ಅಂತಹ ಸಂಚಾರಕ್ಕೆ ಅನುಮತಿ ನೀಡಲಾಗುವುದು.

**ಡಾ. ರಾಜೇಂದ್ರಕೆ.ವಿ, *ಭಾ.ಆ.ಸೇ.***<br>
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ,**<br>
**ಹಾಗೂ ಅಧ್ಯಕ್ಷರು,**<br>
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**<br>
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

# ವಾರಾಂತ್ಯದ ಕರ್ಫ್ಯೂ ಮಾರ್ಗಸೂಚಿಗಳು

**ಈ ಕೆಳಗೆ ಸೂಚಿಸಿದಂತಹ ಅತ್ಯಾವಶ್ಯಕ ಮತ್ತು ತುರ್ತು ಕಾರ್ಯಚಟುವಟಿಕೆಗಳನ್ನು ಹೊರತುಪಡಿಸಿ, ಶುಕ್ರವಾರ ಸಂಜೆ 9:00 ಗಂಟೆಯಿಂದ ಸೋಮವಾರ ಬೆಳಿಗ್ಗೆ 5:00 ಗಂಟೆಯವರೆಗೆ ಜನರ ಓಡಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸತಕ್ಕದ್ದು:**

1. ತುರ್ತು, ಅತ್ಯವಶ್ಯಕ ಸೇವೆಗಳು ಮತ್ತು ಕೋವಿಡ್-19 ನಿಯಂತ್ರಣ ಮತ್ತು ನಿರ್ವಹಣಾ ಕಾರ್ಯಗಳನ್ನು ನಿರ್ವಹಿಸುವ ಎಲ್ಲಾ ರಾಜ್ಯ ಮತ್ತು ಕೇಂದ್ರ ಸರ್ಕಾರಿ ಕಚೇರಿಗಳು ಮತ್ತುಅವುಗಳ ಸ್ವಾಯತ್ತ ಸಂಸ್ಥೆಗಳು, ನಿಗಮಗಳು ಮುಂತಾದವುಗಳು ಸಂಪೂರ್ಣವಾಗಿ ಕಾರ್ಯನಿರ್ವಹಿಸತಕ್ಕದ್ದು ಮತ್ತುಅವುಗಳಅಧಿಕಾರಿ/ಸಿಬ್ಬಂದಿಗಳಿಗೆ ಅನಿರ್ಬಂಧಿತ ಓಡಾಟಕ್ಕೆ ಅವಕಾಶ ನೀಡತಕ್ಕದ್ದು.
2. ತುರ್ತು ಮತ್ತು ಅತ್ಯವಶ್ಯಕ ಸೇವೆಗಳನ್ನು ನಿರ್ವಹಿಸುವ ಮತ್ತು 24x7 ಕಾರ್ಯಾಚರಣೆಗಳು ಅಗತ್ಯವಿರುವ ಎಲ್ಲಾ ಕೈಗಾರಿಕೆಗಳು/ಕಂಪನಿಗಳು/ಸಂಸ್ಥೆಗಳಿಗೆ ಕಾರ್ಯ ನಿರ್ವಹಿಸಲು ಅನುಮತಿಸಿದೆ. ಅಂತಹ ಸಂಸ್ಥೆಗಳ ನೌಕರರು ಆಯಾ ಸಂಘ/ಸಂಸ್ಥೆಗಳು ನೀಡುವ ಅಧಿಕೃತ ಗುರುತಿನ ಚೀಟಿಯನ್ನು ಹಾಜರುಪಡಿಸುವ ಮೂಲಕ ಸಂಚರಿಸಲು ಅನುಮತಿಸತಕ್ಕದ್ದು. ಆದರೆ, ಸಾಧ್ಯವಾದಷ್ಟು ಮಟ್ಟಿಗೆ ನೌಕರರನ್ನು ಮನೆಯಿಂದಲೇ ಕಾರ್ಯನಿರ್ವಹಿಸುವುದಕ್ಕೆ ಪ್ರೋತ್ಸಾಹಿಸಬೇಕು.
3. ದೂರಸಂಪರ್ಕಮತ್ತುಅಂತರ್ಜಾಲ ಸೇವೆ ಒದಗಿಸುವ ಸಂಸ್ಥೆಗಳ ನೌಕರರು ಮತ್ತು ವಾಹನಗಳ ಸಂಚಾರಕ್ಕೆ ಅವರ ಸಂಬಂಧಪಟ್ಟ ಸಂಸ್ಥೆ/ ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ ಹಾಜರುಪಡಿಸಿದ ನಂತರ ಅನುಮತಿಸತಕ್ಕದ್ದು. ಮಾಹಿತಿ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಆಧಾರಿತ ಸೇವೆಗಳ ಕಂಪನಿಗಳು/ಸಂಸ್ಥೆಯ ಅತ್ಯಾವಶ್ಯಕ ಸಿಬ್ಬಂದಿ/ನೌಕರರು ಮಾತ್ರ ಕಚೇರಿಯಿಂದ ಕಾರ್ಯ ನಿರ್ವಹಿಸತಕ್ಕದ್ದು. ಉಳಿದ ಸಿಬ್ಬಂದಿಯು ಮನೆಯಿಂದ ಕಾರ್ಯನಿರ್ವಹಿಸುವುದು.
4. ತುರ್ತು ಚಿಕಿತ್ಸೆಗಾಗಿ ಸಂಚರಿಸಬೇಕಾದ ಅಗತ್ಯವಿರುವ ರೋಗಿಗಳು, ಅವರ ಪರಿಚಾರಕರು/ವ್ಯಕ್ತಿಗಳಿಗೆ ಮತ್ತು ಲಸಿಕೆ ಹಾಕಿಸಿಕೊಳ್ಳಲು ಉದ್ದೇಶಿಸಿರುವ ವ್ಯಕ್ತಿಗಳಿಗೆ ಕನಿಷ್ಠ ದಾಖಲೆಗಳನ್ನು ಹಾಜರು ಪಡಿಸಿ ಸಂಚರಿಸಲು ಅನುಮತಿಸತಕ್ಕದ್ದು.
5. ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಬೆಳಿಗ್ಗೆ 5 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಾರ್ಯನಿರ್ವಹಿಸಲು ಈ ಕೆಳಕಂಡ ಚಟುವಟಿಕೆಗಳಿಗೆ ಅನುಮತಿಸಿದೆ.
   - ಆಹಾರ, ದಿನಸಿ, ಹಣ್ಣುಗಳು ಮತ್ತು ತರಕಾರಿಗಳು, ಮಾಂಸ ಮತ್ತು ಮೀನು, ಡೈರಿ ಮತ್ತು ಹಾಲಿನ ಬೂತ್ ಗಳು ಮತ್ತು ಪ್ರಾಣಿಗಳ ಮೇವನ್ನು ಮಾರಾಟ ಮಾಡುವ ಅಂಗಡಿಗಳು.
   - ಬೀದಿಬದಿ ವ್ಯಾಪಾರಸ್ಥರು.
   - ನ್ಯಾಯ ಬೆಲೆ ಅಂಗಡಿಗಳು.
   - ಸ್ವತಂತ್ರ ಮದ್ಯದಂಗಡಿಗಳು ಮತ್ತು ಮಳಿಗೆಗಳು ಪಾರ್ಸೆಲ್ ಕೊಂಡು ಹೋಗಲು ಮಾತ್ರವೇ ಅವಕಾಶ ನೀಡಿದೆ.

   ಜನರು ತಮ್ಮ ಮನೆಯ ಹೊರಗೆ ಓಡಾಡುವುದನ್ನು ಕಡಿಮೆ ಮಾಡುವುದಕ್ಕಾಗಿ 24x7 ಅವಧಿಯಲ್ಲಿ ಎಲ್ಲಾ ಸಾಮಗ್ರಿಗಳನ್ನು ಹೋಮ ಡೆಲಿವೆರಿ ಮಾಡಲು ಪ್ರೋತ್ಸಾಹಿಸತಕ್ಕದ್ದು. ಈ ಎಲ್ಲಾ ಕಾರ್ಯಾಚರಣೆಗಳು ಕೋವಿಡ್-19 ರ ನಿರ್ವಹಣೆಯ ಸಂಬಂಧ ಹೊರಡಿಸಲಾದ ರಾಷ್ಟ್ರೀಯ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದಕ್ಕೆ ಒಳಪಟ್ಟಿರತಕ್ಕದ್ದು.
6. ರೆಸ್ಟೋರೆಂಟ್ ಮತ್ತು ಹೋಟೆಲ್‌ಗಳಲ್ಲಿ ಆಹಾರವನ್ನು ಮನೆಗೆ ತೆಗೆದುಕೊಂಡು ಹೋಗಲು ಮತ್ತು ಹೋಂಡೆಲಿವರಿ ನೀಡಲು ಮಾತ್ರ ಅನುಮತಿಸತಕ್ಕದ್ದು.

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

7. ಬಸ್, ರೈಲು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿಸಿದೆ. ವಿಮಾನ, ರೈಲು ಮತ್ತು ರಸ್ತೆ ಮೂಲಕ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಲು ವಿಮಾನ ನಿಲ್ದಾಣಗಳಿಗೆ, ಬಸ್ ಟರ್ಮಿನಲ್/ ಬಸ್ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣಗಳಿಗೆ ಹೋಗಿ ಬರುವುದಕ್ಕೆ ಸಾರ್ವಜನಿಕ ಸಾರಿಗೆ ವಾಹನಗಳು, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಸಂಚಾರಕ್ಕೆ ಅನುಮತಿ ನೀಡಲಾಗಿದೆ. ಅಧಿಕೃತ ಪ್ರಯಾಣ ದಾಖಲೆ ಅಥವಾ ಟಿಕೇಟ್ ಅನ್ನು ಪ್ರದರ್ಶಿಸಿದ ಮತ್ತು ಕೋವಿಡ್ ಸಮುಚಿತ ವರ್ತನೆಯನ್ನು ಪಾಲಿಸಿದ ನಂತರವೇ ಅಂತಹ ಸಂಚಾರಕ್ಕೆ ಅನುಮತಿ ನೀಡತಕ್ಕದ್ದು.

**ಡಾ. ರಾಜೇಂದ್ರಕೆ.ವಿ, *ಭಾ.ಆ.ಸೇ.***
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ,**
**ಹಾಗೂ ಅಧ್ಯಕ್ಷರು,**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

**ರಿಗೆ,**

1. ಪೊಲೀಸ್ ಆಯುಕ್ತರು, ಮಂಗಳೂರು ನಗರ – ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಆಯುಕ್ತರು, ಮಹಾನಗರಪಾಲಿಕೆ, ಮಂಗಳೂರು.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದ.ಕ ಮಂಗಳೂರು
6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.
7. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ
8. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ. ಮಂಗಳೂರು / ಪುತ್ತೂರು
9. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
11. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.
12. ಜಿಲ್ಲೆಯ ಎಲ್ಲಾ ತಾಲೂಕುಆರೋಗ್ಯಾಧಿಕಾರಿಗಳಿಗೆ
13. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.
14. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರಪಡಿಸಲು ತಿಳಿಸಿದೆ.